11. ಶಾಸನ ರಚನೆ

ವಿಧೇಯಕಗಳ ಮಂಡನೆ

(ಅ) ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯಗಳ ವಿಧೇಯಕ 2009

ಮಂಡನೆಗೆ ಅನುಮತಿ ಕೋರಿಕೆ :

ಶ್ರೀ ಎಸ್.ಎ.ರವೀಂದ್ರನಾಥ (ಕೃಷಿ ಸಚಿವರು) :- ಮಾನ್ಯ ಅಧ್ಯಕ್ಷರೆ, 2009 ರ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯಗಳ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

"2009ರ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯಗಳ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯಗಳ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಎ.ರವೀಂದ್ರನಾಥ (ಕೃಷಿ ಸಚಿವರು) :- ಮಾನ್ಯ ಅಧ್ಯಕ್ಷರೆ, 2009 ರ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯಗಳ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಡಾ॥ ವಿ.ಎಸ್.ಆಚಾರ್ಯ :- ಮಾನ್ಯ ಮುಖ್ಯಮಂತ್ರಿಗಳು ಆದೇಶಿಸಿರುವಂತೆ, ರಾಜ್ಯ ಸಿವಿಲ್ ಸೇವೆಗಳ ತಿದ್ದುಪಡಿ ವಿಧೇಯಕ 2009 ಅನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಶ್ರೀ ಮಲ್ಲಿಕಾರ್ಜುನ ಖರ್ಗೆ:- ಪರ್ಯಾಲೋಚನೆ ಈಗ ಹೇಗೆ ಮಾಡುತ್ತೀರಿ?

ಡಾ॥ ವಿ.ಎಸ್.ಆಚಾರ್ಯ :- ಅದರಲ್ಲಿ ಏನೂ ಇಲ್ಲ.

(ಗೊಂದಲ)